# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 631 |
| ಮಾನ್ಯ ಸದಸ್ಯರ ಹೆಸರು | ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13/12/2024 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಇಲಾಖೆಯು ಕಳೆದ 03 ವರ್ಷಗಳಿಂದ ಕಟ್ಟಡ ಕಾರ್ಮಿಕ ನಿಧಿಗೆ ನೀಡಿರುವ ಹಣವೆಷ್ಟು; ಪ್ರಸ್ತುತ ಕಟ್ಟಡ ಕಾರ್ಮಿಕರ ನಿಧಿಯಲ್ಲಿ ಎಷ್ಟು ಹಣ ಲಭ್ಯವಿದೆ; | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಿಂದ ಕಟ್ಟಡ ನಿರ್ಮಾಣದ ಅಂದಾಜು ವೆಚ್ಚದ ಮೇಲೆ ಶೇ.1 ರಂತೆ ಕಳೆದ ಮೂರು ವರ್ಷದಲ್ಲಿ ರೂ. 3361.04 ಗಳಷ್ಟು ಮೊತ್ತ ಸುಂಕ ರೂಪದಲ್ಲಿ ಸಂಗ್ರಹವಾಗಿರುತ್ತದೆ.<br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಸುಂಕ ನಿಧಿಯಲ್ಲಿ ಪ್ರಸ್ತುತ ರೂ. 7782.15 ಕೋಟಿಗಳಷ್ಟು (ಸುಂಕ, ನೋಂದಣಿ/ ನವೀಕರಣ, ಬಡ್ಡಿ ಮತ್ತು ಇತರೆ ಸೇರಿದಂತೆ) ಮೊತ್ತ ಲಭ್ಯವಿರುತ್ತದೆ. |
| ಆ) | ಕಟ್ಟಡ ಕಾರ್ಮಿಕರ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ನೀತಿ ನಿಯಮಗಳೇನು; ಕಾರ್ಮಿಕರಲ್ಲದವರೂ ಸಹ ಫಲಾನುಭವಿಗಳಾಗಿರುವುದು ನಿಜವೇ; ಕಟ್ಟಡ ಕಾರ್ಮಿಕರಲ್ಲದ ವ್ಯಕ್ತಿಗಳಿಗೆ ಫಲಾನುಭವಿಗಳಾಗಿ ಆಯ್ಕೆ ಮಾಡಿಕೊಳ್ಳಲಾಗಿದೆಯೇ; ಕಾರ್ಮಿಕರ ನಿಧಿಯು ದುರುಪಯೋಗವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಾಗಿ ನೋಂದಣಿ ಯನ್ನು ಈ ಕೆಳಕಂಡ ನಿಯಮಾನುಸಾರ ಮಾಡಲಾಗುತ್ತಿದೆ.<br><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ರ ಕಲಂ 12 ರ ಪ್ರಾವದಾನಗಳನ್ವಯ ನೋಂದಣಿ ಪೂರ್ವದ 12 ತಿಂಗಳ ಅವಧಿಯಲ್ಲಿ (ಒಂದು ವರ್ಷದಲ್ಲಿ) 90 ದಿನ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ 18-60ರ ವಯೋಮಾನದ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಲು ಮಂಡಳಿಯ ತಂತ್ರಾಂಶ https://kbocwwb.karnataka.gov.in/login ಲಾಗಿನ್‌ನಲ್ಲಿ ನಿಗಧಿಪಡಿಸಿರುವ ಅರ್ಜಿಯನ್ನು ಭರ್ತಿಮಾಡಿ ನೋಂದಣಿ ಮಾಡಬಹುದಾಗಿದೆ.<br>ನೋಂದಣಿಗಾಗಿ ಸಲ್ಲಿಸಬೇಕಾದ ಅಗತ್ಯ ದಾಖಲೆಗಳು:<br>ಎ) ಉದ್ಯೋಗ ಪ್ರಮಾಣ ಪತ್ರ: ಕಟ್ಟಡದ ಮಾಲೀಕರು / ಗುತ್ತಿಗೆದಾರರು, CREDAI (Confederation of Real Estate Developers Association of India), BAI (Builders |

| | | |
|---|---|---|
| | | Association of India) ಅಥವಾ ಕರ್ನಾಟಕ ಸ್ಟೇಟ್ ಕಾಂಟ್ರಾಕ್ಟರ್ ಅಸೋಸಿಯೇಷನ್ ನವರು ನಮೂನೆ - V(A) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ' ಅಥವಾ ನೋಂದಾಯಿತ ಕಾರ್ಮಿಕರ ಸಂಘಗಳು ನಮೂನೆ- V(B) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ' ಅಥವಾ ಕಾರ್ಮಿಕ ಅಧಿಕಾರಿ/ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರು ನಮೂನೆ- V(C) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ' ಅಥವಾ ಪಂಚಾಯತಿ ಅಭಿವೃದ್ಧಿ ಅಧಿಕಾರಿ / ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ನಮೂನೆ- V(D) ರಲ್ಲಿ ನೀಡುವಂತಹ 'ಉದ್ಯೋಗದ ದೃಢೀಕರಣ ಪತ್ರ.<br>ಬಿ) ಅರ್ಜಿದಾರರ ಬ್ಯಾಂಕ್ ಪುಸ್ತಕದ ಮುಖಪುಟದ ನಕಲು ಪ್ರತಿ<br>ಸಿ) ಅರ್ಜಿದಾರರು ಒಂದು ವರ್ಷದಲ್ಲಿ ಕನಿಷ್ಠ 90 ದಿನಗಳ ಕಾಲ ಕಟ್ಟಡ ಅಥವಾ ಇತರೆ ನಿರ್ಮಾಣ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸಿದ ಬಗ್ಗೆ ಸ್ವಯಂ ಧೃಢೀಕರಣ ಪ್ರಮಾಣ ಪತ್ರ ಮತ್ತು ಲಭ್ಯವಿದ್ದಲ್ಲಿ ವೇತನ ಚೀಟಿ ಅಥವಾ ಹಾಜರಾತಿ ವಹಿ<br><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ನಿಗಧಿತ ದಾಖಲೆಗಳನ್ನು ಸಲ್ಲಿಸಿ, ತಂತ್ರಾಂಶದಲ್ಲಿ ನೋಂದಣಿಯಾಗುತ್ತಾರೆ. ಕಾರ್ಮಿಕರು ಸಲ್ಲಿಸಿರುವ ದಾಖಲೆಗಳನ್ನು ಪರಿಶೀಲಿಸಿ, ನೋಂದಣಿ ಮಾಡಲಾಗುತ್ತಿದೆ. ಕೆಲವೊಮ್ಮೆ ಕಾರ್ಮಿಕರು ಸುಳ್ಳು ದಾಖಲೆಗಳನ್ನು ಕೂಡ ಸಲ್ಲಿಸಿ, ನೋಂದಣಿಯಾಗುತ್ತಾರೆ. ರಾಜ್ಯಾದಾದ್ಯಂತ ಇಂತಹ 2.43 ಲಕ್ಷ ಅನರ್ಹ ನೊಂದಣಿಯನ್ನು ಪತ್ತೆ ಹಚ್ಚಿ ರದ್ದು ಪಡಿಸಲಾಗಿರುತ್ತದೆ.<br>ಮಂಡಳಿಯ ಎಲ್ಲಾ ಯೋಜನೆಗಳನ್ನು ಮಂಡಳಿಯ ಸಭೆಯ ತೀರ್ಮಾನ ಹಾಗೂ ಅವಶ್ಯವಿದ್ದಲ್ಲಿ ಸರ್ಕಾರದ ಅನುಮೋದನೆ ಪಡೆದು, ಅನುಷ್ಠಾನ ಮಾಡಲಾಗುತ್ತಿದ್ದು, ಕಾರ್ಮಿಕರ ನಿಧಿಯ ದುರುಪಯೋಗವಾಗುತ್ತಿರುವುದಿಲ್ಲ.. |
| ಇ) | ಕಟ್ಟಡ ಕಾರ್ಮಿಕರು ಬಹಳಷ್ಟು ಸಂಖ್ಯೆಯಲ್ಲಿ ಅನ್ಯರಾಜ್ಯದ ಜನರೇ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಇವರನ್ನು ಸಹ ಫಲಾನುಭವಿಗಳಾಗಿ ಆಯ್ಕೆ ಮಾಡಿಕೊಳ್ಳಲು ಅವಕಾಶವಿದೆಯೇ; | ಬಹುತೇಕ ವಲಸೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಕರ್ನಾಟಕ ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿದ್ದು, ವಲಸೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಸಹ ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿಸಿಕೋಂಡು ಅವರು ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಮಂಡಳಿಯ ವತಿಯಿಂದ ಪಡೆಯಲು ಅವಕಾಶವಿರುತ್ತದೆ. |

**ಕಡತ ಸಂಖ್ಯೆ ಕಾಇ 559 ಎಲ್‌ಇಟಿ 2024**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**